ಕರ್ನಾಟಕ ಸರ್ಕಾರ

ವಿಷಯ :- ಶ್ರೀ ರವಿಕಾಂತಮಣಿ.ಸಿ., ಸಹಾಯಕ ನಿರ್ದೇಶಕರು(ಗ್ರಾಮೀಣ ಉದ್ಯೋಗ) ಇವರ ವಿರುದ್ಧದ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿಗಳನ್ನು ನೇಮಿಸುವ ಬಗ್ಗೆ ಆದೇಶ.

ಓದಲಾಗಿದೆ :-1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾಸನ ಇವರ ಪತ್ರ ಸಂಖ್ಯೆ : ಜಿಪಂಹಾ / ಆ (2) ಸಿಸಿಎ 02 / 2013-14, ದಿನಾಂಕ : 20.09.2014

2)ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ : ಗ್ರಾಅಪ 298 ಕೆಎಸ್‌ಎಸ್ 2014, ದಿನಾಂಕ : 25.09.2014.

3) ಶ್ರೀ ರವಿಕಾಂತಮಣಿ, ಸಿ, ಸಹಾಯಕ ನಿರ್ದೇಶಕರು(ಗ್ರಾಮೀಣ ಉದ್ಯೋಗ) ಇವರ ಲಿಖಿತ ಹೇಳಿಕೆ, ದಿನಾಂಕ : 30.8.2014.

4) ಸರ್ಕಾರದ ಪತ್ರ ಸಂಖ್ಯೆ : ಗ್ರಾಅಪ 298 ಕೆಎಸ್‌ಎಸ್ 2014, ದಿ:08.08.2016

5) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾಸನ ಇವರ ಪತ್ರ ಸಂಖ್ಯೆ: ಜಿಪಂಹಾ/ಆ(2) ಸಿಸಿಎ 02/2013-14 ದಿನಾಂಕ:28.09.2016.

*******

ಪ್ರಸ್ತಾವನೆ :-

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾಸನ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ : 20.09.2014 ರ ಪತ್ರದೊಂದಿಗೆ ಶ್ರೀ ರವಿಕಾಂತಮಣಿ. ಸಿ., ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ), ತಾಲ್ಲೂಕು ಪಂಚಾಯತಿ, ನಾಗಮಂಗಲ, ಮಂಡ್ಯ ಜಿಲ್ಲೆ ಇವರು ಈ ಹಿಂದೆ ಅರಕಲಗೂಡು ತಾಲ್ಲೂಕು ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ ಇವರ ವಿರುದ್ಧ ಹಾಸನ ನಗರ ಪೋಲೀಸ್ ಠಾಣೆಯಲ್ಲಿ ಕ್ರಿಮಿನಲ್ ಮೊಕದ್ದಮೆ ದಾಖಲಾಗಿದ್ದು, ಸದರಿಯವರ ವಿರುದ್ಧ ಶಿಸ್ತುಕ್ರಮ ಜರುಗಿಸಲು ಕರಡು ದೋಷಾರೋಪಣೆ ಪಟ್ಟಿ (ಅನುಬಂಧ - 1 ರಿಂದ 4) ಅನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಶ್ರೀ ರವಿಕಾಂತಮಣಿ. ಸಿ., ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ), ತಾಲ್ಲೂಕು ಪಂಚಾಯತಿ, ನಾಗಮಂಗಲ, ಮಂಡ್ಯ ಜಿಲ್ಲೆ ಇವರಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ದಿನಾಂಕ:25.09.2014 ಕಾರಣ ಕೇಳುವ ನೋಟೀಸ್‌ನೊಂದಿಗೆ ದೋಷಾರೋಪಣಾ ಪಟ್ಟಿ (ಅನುಬಂಧ 1 - 4) ನ್ನು ಜಾರಿ ಮಾಡಿ ಲಿಖಿತ ಸಮಜಾಯಿಷಿಯನ್ನು ಸಲ್ಲಿಸುವಂತೆ ಸೂಚಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (3)ರಲ್ಲಿ ಶ್ರೀ ರವಿಕಾಂತಮಣಿ ಇವರು ಸಲ್ಲಿಸಿದ ಲಿಖಿತ ಹೇಳಿಕೆಯನ್ನು ಯಥಾವತ್ತಾಗಿ ಕಳುಹಿಸಿದ್ದು, ಸದರಿಯವರ ಹೇಳಿಕೆಯಲ್ಲಿ ಪರಿಗಣನಾರ್ಹವಾದ ಅಂಶಗಳು ಕಂಡುಬರದ ಹಿನ್ನೆಲೆಯಲ್ಲಿ ಮೇಲೆ ಓದಲಾದ ಕ್ರಮ ಸಂಖ್ಯೆ (4)ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಹಾಸನ ರವರಿಗೆ ಆರೋಪಿತ ಅಧಿಕಾರಿಯವರ ಲಿಖಿತ ಹೇಳಿಕೆಯ ಕುರಿತು ಕೂಲಂಕಷವಾಗಿ ಪರಿಶೀಲಿಸಿ ಸ್ಪಷ್ಟ ಅಭಿಪ್ರಾಯದೊಂದಿಗೆ ವರದಿಯನ್ನು ನೀಡುವಂತೆ ತಿಳಿಸಲಾಗಿತ್ತು. ಅದರಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (5)ರಲ್ಲಿ ಮು.ಕಾ.ನಿ.ಅ., ರವರು ಪೋಲೀಸ್ ಉಪ ನಿರೀಕ್ಷಕರು (ಕಾ & ಸು), ನಗರ ಪೋಲೀಸ್ ಠಾಣೆ, ಹಾಸನ ರವರ ಪತ್ರ ಹಾಗೂ ಪ್ರಥಮ ವರ್ತಮಾನ ವರದಿಯ ಪ್ರತಿಯನ್ನು ಲಗತ್ತಿಸಿ ಕಳುಹಿಸುತ್ತಾ ಸದರಿಯವರು ಪ್ರಕೃತಿಗೆ ವಿರುದ್ಧವಾಗಿ ಲೈಂಗಿಕ ಕ್ರಿಯೆಯಲ್ಲಿ ಪಾಲ್ಗೊಂಡಿದ್ದರಿಂದ ದಿನಾಂಕ: 04.11.2013 ರಂದು ರಾತ್ರಿ 2.30ರ ಸಮಯದಲ್ಲಿ ದಸ್ತಗಿರಿ ಮಾಡಿ, ಬೆಳಗಿನ ಜಾವ 5.30ಕ್ಕೆ ಘನ ನ್ಯಾಯಾಲಯಕ್ಕೆ ಹಾಜರುಪಡಿಸಿ, ನ್ಯಾಯಾಂಗ ಬಂಧನದಲ್ಲಿರಿಸಲಾಗಿದೆ. ಈ ಸಂಬಂಧ ಅಪರಾಧ ಸಂಖ್ಯೆ:350/2013, ದಿನಾಂಕ:04.11.2013 ರಲ್ಲಿ ಭಾರತ ದಂಡಸಂಹಿತೆ ಕಲಂ 143, 377, 114, 506 ಮತ್ತು 270 ರಡಿ ಕ್ರಿಮಿನಲ್ ಪ್ರಕರಣವನ್ನು ಹಾಸನ ನಗರ ಪೋಲೀಸ್ ಠಾಣೆಯಲ್ಲಿ ದಾಖಲಿಸಲಾಗಿದೆ. ಶ್ರೀ ರವಿಕಾಂತಮಣಿ ಸಿ., ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ಇವರು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ನಾಗಮಂಗಲ, ಮಂಡ್ಯ ಜಿಲ್ಲೆ ಇವರ ಮುಖಾಂತರ ದಿನಾಂಕ: 10/13.10.2014ರಲ್ಲಿ ಸರ್ಕಾರಕ್ಕೆ ಲಿಖಿತ ಹೇಳಿಕೆಯನ್ನು ಸಲ್ಲಿಸಿದ್ದು, ಆರೋಪಿತರು ಸರ್ಕಾರಕ್ಕೆ ಸಲ್ಲಿಸಿರುವ ರಕ್ಷಣಾ ಹೇಳಿಕೆಯನ್ನು ಅವಲೋಕಿಸಿದಾಗ ಆಪಾದಿತರು ದಿನಾಂಕ:4.11.2013 ರಂದು ಬಂಧನಕ್ಕೊಳಗಾಗಿರುವುದು ಹಾಗೂ ಸುಳ್ಳು ದೂರಿನ ಮೇಲೆ ಎಫ್‌ಐಆರ್ ದಾಖಲಿಸಿರುವುದಾಗಿ ತಿಳಿಸಿರುವುದು

..2..

ಸಮಂಜಸವಾಗಿರುವುದಿಲ್ಲ. ಕಾನೂನಿನ ಪ್ರಕಾರ ಸದರಿಯವರನ್ನು ಬಂಧನಕ್ಕೊಳಪಡಿಸಿ, ನ್ಯಾಯಾಂಗ ಬಂಧನದಲ್ಲಿರಿಸಿದ್ದು, ನಂತರ ಜಾಮೀನಿನ ಮೇಲೆ ಬಿಡುಗಡೆಗೊಂಡಿರುತ್ತಾರೆ. ಪ್ರಸ್ತುತ ಇವರ ವಿರುದ್ಧವಿರುವ ಕ್ರಿಮಿನಲ್ ಪ್ರಕರಣದ ಸಿ.ಸಿ.ನಂ.424/2014 ರಂತೆ ಘನ ನ್ಯಾಯಾಲಯದಲ್ಲಿ ವಿಚಾರಣೆಯು ಪ್ರಗತಿಯಲ್ಲಿರುವ ಹಿನ್ನೆಲೆಯಲ್ಲಿ ಸದರಿಯವರು ಸರ್ಕಾರಕ್ಕೆ ಸಲ್ಲಿಸಿರುವ ರಕ್ಷಣಾ ಹೇಳಿಕೆಯನ್ನು ಅಂಗೀಕರಿಸಬಾರದೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಹಾಸನ ರವರು ಅಭಿಪ್ರಾಯವನ್ನು ನೀಡಿರುತ್ತಾರೆ.

ಶ್ರೀ ರವಿಕಾಂತಮಣಿ.ಸಿ., ಸಹಾಯಕ ನಿರ್ದೇಶಕರು(ಗ್ರಾಮೀಣ ಉದ್ಯೋಗ) ಇವರ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯುವ ಸಲುವಾಗಿ ಇಲಾಖಾ ವಿಚಾರಣೆ ಜರುಗಿಸಲು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 298 ಕೆಎಸ್ ಎಸ್ 2014**
**ಬೆಂಗಳೂರು, ದಿನಾಂಕ: 07. 12.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಶ್ರೀ ರವಿಕಾಂತಮಣಿ. ಸಿ., ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ), ತಾಲ್ಲೂಕು ಪಂಚಾಯತಿ, ನಾಗಮಂಗಲ, ಮಂಡ್ಯ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11 ರನ್ವಯ ಇಲಾಖಾ ವಿಚಾರಣೆಯನ್ನು ನಡೆಸಲು ಶ್ರೀ ಎಸ್.ವೈ.ಕುಂಬಾರ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ಇಲಾಖಾ ವಿಚಾರಣಾಧಿಕಾರಿಯನ್ನಾಗಿ ಹಾಗೂ ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಹಾಸನ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

ವಿಚಾರಣಾಧಿಕಾರಿಗಳು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 11 ರಲ್ಲಿ ನಿಗಧಿಪಡಿಸಿರುವ ಕಾರ್ಯವಿಧಾನದ ಪ್ರಕಾರ ಇಲಾಖಾ ವಿಚಾರಣೆಯನ್ನು ನಡೆಸಿ ವಿಚಾರಣಾ ವರದಿಯನ್ನು 3 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗಧಿತ ಸಂಭಾವನೆಯನ್ನು ಪಡೆಯಲು ಅರ್ಹರಾಗಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

07/12/2016

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ
(ಸೇವೆಗಳು ಬಿ ಮತ್ತು ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

7/12/2016

ಇವರಿಗೆ :-

1) ಮಹಾಲೇಖಪಾಲರು, (ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾಸನ.
3) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಅರಕಲಗೂಡು / ನಾಗಮಂಗಲ.
4) ಶ್ರೀ ಎಸ್.ವೈ.ಕುಂಬಾರ್ , ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ.394, 18ನೇ ಮೇನ್, 6ನೇ ಬ್ಲಾಕ್, ಕೋರಮಂಗಲ, ಬೆಂಗಳೂರು-95 (ಮೊಬೈಲ್ ಸಂಖ್ಯೆ: 9900245450)
5) ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಹಾಸನ - ಪ್ರಕರಣಕ್ಕೆ ಸಂಬಂಧಿಸಿದ ದಾಖಲೆಗಳನ್ನು ವಿಚಾರಣಾಧಿಕಾರಿಗಳಿಗೆ ಮಂಡಿಸಿ ವಿಚಾರಣೆ ಸುಗಮವಾಗಿ ನಡೆಸಲು ಕ್ರಮವಹಿಸಲು ಕೋರಿದೆ.
6) ಶ್ರೀ ರವಿಕಾಂತಮಣಿ. ಸಿ., ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ), ತಾಲ್ಲೂಕು ಪಂಚಾಯತಿ, ನಾಗಮಂಗಲ, ಮಂಡ್ಯ ಜಿಲ್ಲೆ
7) ಸರ್ಕಾರದ ಪ್ರಧಾನ ಕಾರ್ಯದರ್ಶಿ / ಸರ್ಕಾರದ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ
8) ಸರ್ಕಾರದ ಜಂಟಿ ಕಾರ್ಯದರ್ಶಿ (ಆಡಳಿತ-2), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
9) ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
10) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.